ಇಲಾಖೆ / ವಿಷಯ : DEPARTMENT / SUBJECT: ಕೋವಿಡ್-19

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡ ಪ್ರಭ ದಿನಾಂಕ : DATE: 12/4/21

## ಏಪ್ರಿಲ್ ಅಂತ್ಯದ ವೇಳೆಗೆ ವೀಕೆಂಡ್ ಲಾಕ್ ಸಂಭವ

# ಮತ್ತೆ ಲಾಕ್ಡೌನ್ ಭೀತಿ!


### ಸೋಂಕು ಹೆಚ್ಚಾಗುತ್ತಿದೆ, ಲಾಕ್‌ಡೌನ್ ಹೇರಿಕೆ ಬಗ್ಗೆ ಪರಿಶೀಲಿಸಿ: ಸರ್ಕಾರಕ್ಕೆ ತಜ್ಞರ ಸಲಹೆ
### ಲಾಕ್‌ಡೌನ್‌ನಿಂದ ಆರ್ಥಿಕತೆಗೆ ಹೊಡೆತ, ಬೇರೆ ಸಲಹೆ ಕೊಡಿ: ಸಚಿವ ಡಾ| ಕೆ.ಸುಧಾಕರ್

ರಾಜ್ಯದಲ್ಲಿ ನೈಟ್ ಕರ್ಫ್ಯೂ, ಮೈಕ್ರೋ ಲಾಕ್‌ಡೌನ್ ಹಾಗೂ ಲಾಕ್‌ಡೌನ್ ಪ್ರಸ್ತಾಪವೇ ಇಲ್ಲ ಎಂದು ರಾಜ್ಯ ಸರ್ಕಾರ ಪದೇಪದೇ ಹೇಳಿಕೊಂಡು ಬಂದಿತ್ತು. ಇದೀಗ ಸೋಂಕು ಹಠಾತ್ತನೆ ಹೆಚ್ಚಳವಾದ ಬೆನ್ನಲ್ಲೇ 8 ನಗರಗಳಲ್ಲಿ ರಾತ್ರಿ ಕರ್ಫ್ಯೂ ಜಾರಿಯಾಗಿದೆ. ವೀಕೆಂಡ್ ಲಾಕ್‌ಡೌನ್ ಬಗ್ಗೆ ಚರ್ಚೆ ಆರಂಭವಾಗಿದೆ. ತಜ್ಞರು ಲಾಕ್‌ಡೌನ್‌ಗೆ ಶಿಫಾರಸು ಮಾಡುತ್ತಿದ್ದಾರೆ. ಜನರು ಇದೇ ರೀತಿ ನಿರ್ಲಕ್ಷ್ಯ ವಹಿಸಿ, ಸೋಂಕು ಉಲ್ಬಣಿಸಿದರೆ ರಾಜ್ಯಾದ್ಯಂತ ಮತ್ತೊಮ್ಮೆ ಲಾಕ್‌ಡೌನ್ ಜಾರಿಯಾದರೂ ಅಚ್ಚರಿಯಿಲ್ಲ.

• **ಕನ್ನಡಪ್ರಭ ವಾರ್ತೆ** ಬೆಂಗಳೂರು 12.4.21

ರಾಜ್ಯದಲ್ಲಿ ಕೊರೋನಾ ಅಬ್ಬರ ಇನ್ನಷ್ಟು ಹೆಚ್ಚುತ್ತಾ ಮುಂದುವರೆದರೆ ಏಪ್ರಿಲ್ ಅಂತ್ಯದಿಂದ ವಾರಾಂತ್ಯದ ಲಾಕ್‌ಡೌನ್ ಜಾರಿ, ಬಳಿಕವೂ ಸೋಂಕು ನಿಯಂತ್ರಣಕ್ಕೆ ಬಾರದಿದ್ದರೆ ಮೇನಲ್ಲಿ ಸಂಪೂರ್ಣ ಲಾಕ್‌ಡೌನ್ ಜಾರಿ ಮಾಡುವ ಭೀತಿ ಎದುರಾಗಿದೆ.

ರಾಜ್ಯದಲ್ಲಿ ದಿನದಿಂದ ದಿನಕ್ಕೆ ಸೋಂಕು ಪ್ರಕರಣ ಹಾಗೂ ಸಾವಿನ ಪ್ರಮಾಣ ಹೆಚ್ಚುತ್ತಿದ್ದು, ಭಾನುವಾರ ರಾಜ್ಯದಲ್ಲಿ ಕೊರೋನಾ ಸೋಂಕು ಪ್ರಕರಣ 10 ಸಾವಿರ ಗಡಿ ದಾಟಿದೆ. ಚಿಕಿತ್ಸೆ ನೀಡಲು ಬೆಡ್, ಐಸಿಯು ಕೊರತೆ ಉಂಟಾಗುತ್ತಿದೆ.



ಆದರೂ, ರಾಜ್ಯಾದ್ಯಂತ ಜನರು ಕೊರೋನಾ ನಿಯಂತ್ರಣ ಮಾರ್ಗಸೂಚಿ ಪಾಲಿಸದೆ ನಿರ್ಲಕ್ಷ್ಯ ವಹಿಸುತ್ತಿದ್ದಾರೆ. ಇದೇ ರೀತಿ ಪ್ರಕರಣ ಹೆಚ್ಚಾದರೆ ಮೇ ಮೊದಲ ವಾರದ ವೇಳೆಗೆ ನಿತ್ಯ 25 ಸಾವಿರ ಪ್ರಕರಣಗಳು ವರದಿಯಾಗಬಹುದೆಂದು ತಜ್ಞರು ಲೆಕ್ಕಾಚಾರ ಹಾಕಿದ್ದಾರೆ. ಹೀಗಾಗಿ ಅನಿವಾರ್ಯವಾಗಿ ಸರ್ಕಾರ ಲಾಕ್‌ಡೌನ್‌ಗೆ ಮುಂದಾಗಬಹುದು ಎಂದು ಆತಂಕ ಆವರಿಸಿದೆ.

ವಿಧಾನಸೌಧದಲ್ಲಿ ಭಾನುವಾರ ನಡೆದ ಕೊರೋನಾ ತಾಂತ್ರಿಕ ಸಲಹಾ ಸಮಿತಿ ಸಭೆಯಲ್ಲೂ ಲಾಕ್‌ಡೌನ್ ಪ್ರಸ್ತಾಪವಾಗಿದ್ದು, ಆದಷ್ಟೂ ವಾಣಿಜ್ಯ ಚಟುವಟಿಕೆ ಹಾಗೂ ಜನರ ಜೀವನಾಧಾರಕ್ಕೆ ಅಡ್ಡಿಯಾಗದಂತೆ ಜನದಟ್ಟಣೆ ಉಂಟು ಮಾಡುವ ಕಾರ್ಯಕ್ರಮಗಳನ್ನು ಕಟ್ಟುನಿಟ್ಟಾಗಿ ನಿಷೇಧಿಸುವ ಬಗ್ಗೆ ನಿರ್ಧರಿಸಲಾಗಿದೆ. ಪರಿಸ್ಥಿತಿ ಕೈ ಮೀರಿದರೆ ಅನಿವಾರ್ಯವಾಗಿ ಲಾಕ್‌ಡೌನ್ ಮಾಡಬೇಕಾಗುತ್ತದೆ ಎಂಬ ಅಭಿಪ್ರಾಯವೂ ವ್ಯಕ್ತವಾಗಿದೆ ಎಂದು ಮೂಲಗಳು ತಿಳಿಸಿವೆ. ಸಭೆಯಲ್ಲಿ ತಜ್ಞರು ಮತ್ತೆ ಲಾಕ್‌ಡೌನ್ ಮಾಡಬೇಕಾಗಿ ಬರುವ ಅನಿವಾರ್ಯತೆ ಬಗ್ಗೆ ಪ್ರಸ್ತಾಪಿಸಿದರು. ಆಗ ಸಚಿವ ಡಾ| ಸುಧಾಕರ್ ಅವರು, ಲಾಕ್‌ಡೌನ್‌ನಿಂದ ಆರ್ಥಿಕತೆಗೆ ಹೊಡೆತ ಬೀಳುತ್ತದೆ. ಹೀಗಾಗಿ ಆರ್ಥಿಕತೆಗೆ ಸಮಸ್ಯೆಯಾಗದ ರೀತಿಯ ಸಲಹೆ ನೀಡಿ ಎಂದು ಕೋರಿದರು ಎಂದು ಹೇಳಲಾಗಿದೆ.

» 10

## ನಿಯಮ ಪಾಲಿಸದಿದ್ದರೆ ಲಾಕ್ಡೌನ್ ಹೇರುವ ಸ್ಥಿತಿ ಬರುತ್ತೆ: ಸುಧಾಕರ್

### ಸೋಂಕು ನಿಯಂತ್ರಣಕ್ಕೆ ಲಾಕ್‌ಡೌನ್ ಅನಿವಾರ್ಯ: ಆರೋಗ್ಯ ಸಚಿವ
### ಲಾಕ್ಡೌನ್ ಬೇಡ ಎಂದರೆ ಮಾಸ್ಕ್ ಧರಿಸಿ, ಸಾಮಾಜಿಕ ಅಂತರ ಪಾಲಿಸಿ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಸಾರ್ವಜನಿಕರು ಕೋವಿಡ್ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸದೆ ಕೊರೋನಾ ಪರಿಸ್ಥಿತಿ ಕೈಮೀರುವ ಹಂತಕ್ಕೆ ಬಂದರೆ ರಾಜ್ಯದಲ್ಲಿ ಲಾಕ್‌ಡೌನ್ ಹೇರುವಂತಹ ಸ್ಥಿತಿ ನಿರ್ಮಾಣವಾಗಬಹುದು ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವ ಡಾ.ಕೆ.ಸುಧಾಕರ್ ಪರೋಕ್ಷವಾಗಿ ಎಚ್ಚರಿಕೆ ನೀಡಿದ್ದಾರೆ.

ಅಟಲ್ ಬಿಹಾರಿ ವಾಜಪೇಯಿ ವೈದ್ಯಕೀಯ ಮತ್ತು ಸಂಶೋಧನಾ ಸಂಸ್ಥೆಯಲ್ಲಿ ಕೋವಿಡ್ ಲಸಿಕಾ ಉತ್ಸವಕ್ಕೆ ಚಾಲನೆ ನೀಡಿದ ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದರು.

» 10



ಏ.14ರವರೆಗೆ ನಡೆಯಲಿರುವ ಲಸಿಕಾ ಮಹೋತ್ಸವಕ್ಕೆ ಬೆಂಗಳೂರಿನಲ್ಲಿ ಭಾನುವಾರ ಆರೋಗ್ಯ ಸಚಿವ ಡಾ| ಕೆ. ಸುಧಾಕರ್ ಚಾಲನೆ ನೀಡಿದರು.

2

# ರಾಜ್ಯದಲ್ಲಿ ಮತ್ತೆ ಲಾಕ್‌ಡೌನ್ ಭೀತಿ!

← ಮೊದಲ ಪುಟದಿಂದ

ಈಗಾಗಲೇ ಮಹಾರಾಷ್ಟ್ರದಲ್ಲಿ ವಾರಾಂತ್ಯದ ಲಾಕ್‌ಡೌನ್ ಘೋಷಿಸಲಾಗಿದೆ. ಇದೇ ಮಾದರಿಯಲ್ಲಿ ರಾಜ್ಯದಲ್ಲೂ ಏಪ್ರಿಲ್ ಕೊನೆಯ ವಾರದ ವೇಳೆಗೆ ಶುಕ್ರವಾರ ರಾತ್ರಿ 10 ಗಂಟೆಯಿಂದ ಸೋಮವಾರ ಬೆಳಗ್ಗೆ 5 ಗಂಟೆವರೆಗೆ ವಾರಾಂತ್ಯದ ಲಾಕ್‌ಡೌನ್ ಘೋಷಣೆಯಾಗಬಹುದು. ಬಳಿಕವೂ ಸೋಂಕು ನಿಯಂತ್ರಣಕ್ಕೆ ಬಾರದಿದ್ದರೆ ಮೇ ತಿಂಗಳಲ್ಲಿ ಸಂಪೂರ್ಣ ಲಾಕ್‌ಡೌನ್ ಆಗಬಹುದು ಎಂಬ ಚರ್ಚೆಗಳು ಶುರುವಾಗಿವೆ.

**ಸಮಿತಿಯ ಸಲಹೆ:** ಆರೋಗ್ಯ ಸಚಿವ ಡಾ.ಕೆ. ಸುಧಾಕರ್ ನೇತೃತ್ವದಲ್ಲಿ ಭಾನುವಾರ ನಡೆದ ತುರ್ತು ಸಭೆಯಲ್ಲಿ ಡಾ.ಎಂ.ಕೆ. ಸುದರ್ಶನ್ ಅಧ್ಯಕ್ಷತೆ ಕೊರೋನಾ ತಾಂತ್ರಿಕ ಸಲಹಾ ಸಮಿತಿ ಕೊರೋನಾ ನಿಯಂತ್ರಣಕ್ಕೆ ಕೆಲವು ಸಲಹೆಗಳನ್ನು ನೀಡಿದೆ.

ಯಾವುದೇ ವಾಣಿಜ್ಯ ಚಟುವಟಿಕೆಗೆ ತೊಂದರೆ ಆಗದಂತೆ ಜನದಟ್ಟಣೆ ಉಂಟಾಗುವ ಸ್ಥಳಗಳಲ್ಲಿ ಮಾತ್ರ 144 ಸೆಕ್ಷನ್ ಅನ್ನು ಪರಿಣಾಮಕಾರಿಯಾಗಿ ಜಾರಿ ಮಾಡಬೇಕು. ಜಾತ್ರೆ, ಮದುವೆ, ಉತ್ಸವಗಳಲ್ಲಿ ಜನರು ಸೇರದಂತೆ ನಿರ್ಬಂಧಿಸಬೇಕು. ಐಸ್‌ಕ್ರೀಂ ಪಾರ್ಲರ್, ಚಾಟ್ ಸೆಂಟರ್, ದರ್ಶಿನಿ ಹೋಟೆಲ್‌ಗಳ ಮುಂದೆ ಜನರು ಸರದಿ ಸಾಲಲ್ಲಿ ನಿಲ್ಲುವುದನ್ನು ಕಡ್ಡಾಯವಾಗಿ ನಿಯಂತ್ರಿಸಬೇಕು ಎಂಬ ಸಲಹೆ ವ್ಯಕ್ತವಾಗಿದೆ.

ಲಾಕ್‌ಡೌನ್ ಬಗ್ಗೆ ಪ್ರಸ್ತಾಪವಾದ ವೇಳೆ, ಮೊದಲ ಅಲೆಯ ವೇಳೆ ಅಗತ್ಯವಿರುವ ವೈದ್ಯಕೀಯ ವ್ಯವಸ್ಥೆಗಳನ್ನು ಮಾಡಿಕೊಳ್ಳಲು ಸಮಯಾವಕಾಶ ಬೇಕಾಗಿತ್ತು. ಏಕಾಏಕಿ ಸೋಂಕು ಹೆಚ್ಚಾದರೆ ಬೆಡ್ ಸಮಸ್ಯೆಯಾಗಿ ಚಿಕಿತ್ಸೆ ದೊರೆಯುವುದಿಲ್ಲ ಎಂಬ ಭಯವಿತ್ತು. ಈಗ ಅಂತಹ ಪರಿಸ್ಥಿತಿ ಇಲ್ಲ. ತುರ್ತಾಗಿ ಅಗತ್ಯ ಚಿಕಿತ್ಸಾ ಸಿದ್ಧತೆಗಳನ್ನು ಮಾಡಿಕೊಂಡರೆ ಸಾಕು. ಆದರೆ ಮೊದಲ ಅಲೆ ವೇಳೆ ದಿನವೊಂದರಲ್ಲಿ ವರದಿಯಾಗಿದ್ದ ಪ್ರಕರಣಗಳಿಗಿಂತ ಶೇ.50 ರಷ್ಟು ಹೆಚ್ಚು ಸೋಂಕು ಈ ಬಾರಿ ವರದಿಯಾಗುವ ಸಾಧ್ಯತೆ ಇದೆ. ಒಂದೇ ದಿನ 25 ಸಾವಿರದಷ್ಟು ಪ್ರಕರಣ ವರದಿಯಾದರೆ, ಆ್ಯಂಬುಲೆನ್ಸ್ ಹಾಗೂ ವೆಂಟಿಲೇಟರ್‌ಗಳ ಕೊರತೆ ಉಂಟಾಗುತ್ತದೆ. ಆ ರೀತಿ ಏಕಾಏಕಿ ಸೋಂಕು ಹೆಚ್ಚಾಗಬಾರದು ಎಂದಾದರೆ ಲಾಕ್‌ಡೌನ್ ಅನಿವಾರ್ಯವಾಗಲಿದೆ. ಈ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳಬೇಕು ಎಂದು ತಾಂತ್ರಿಕ ಸಲಹಾ ಸಮಿತಿ ಸದಸ್ಯರೊಬ್ಬರು ಸಲಹೆ ನೀಡಿದರು ಎಂದು ತಿಳಿದು ಬಂದಿದೆ.

# ನಿಯಮ ಪಾಲಿಸದಿದ್ದರೆ ಲಾಕ್‌ಡೌನ್ ಹೇರುವ ಸ್ಥಿತಿ ಬರುತ್ತೆ: ಸುಧಾಕರ್

← ಮೊದಲ ಪುಟದಿಂದ

ಈಗಾಗಲೇ ಮಹಾರಾಷ್ಟ್ರದಲ್ಲಿ ಕೊರೋನಾ ಮಾರ್ಗಸೂಚಿ ಪಾಲಿಸದ ಕಾರಣಕ್ಕೆ ಪ್ರಕರಣಗಳು ಹೆಚ್ಚಾದ ಪರಿಣಾಮ ವಾರಾಂತ್ಯದ ಲಾಕ್‌ಡೌನ್ ಜಾರಿ ಮಾಡಲಾಗಿದೆ. ಯಾವ ರಾಜ್ಯ, ದೇಶದಲ್ಲಿ ಕೋವಿಡ್ ಮುನ್ನೆಚ್ಚರಿಕೆ ಕ್ರಮಗಳ ಬಗ್ಗೆ ನಿರ್ಲಕ್ಷ್ಯ ತಾಳಿದ್ದಾರೋ ಅಲ್ಲೆಲ್ಲ ಕೊರೋನಾ ಸೋಂಕು ಹರಡುವುದನ್ನು ನಿಯಂತ್ರಣ ಮಾಡಲು ಲಾಕ್‌ಡೌನ್ ಜಾರಿ ಮಾಡುವುದು ಅಲ್ಲಿನ ಸರ್ಕಾರಗಳಿಗೆ ಅನಿವಾರ್ಯವಾಗಿದೆ ಸಚಿವರು ಉದಾಹರಣೆ ನೀಡಿವರು.



ರಾಜ್ಯದಲ್ಲಿ ಲಾಕ್‌ಡೌನ್ ಜಾರಿಯಾಗುವಂತಹ ಪರಿಸ್ಥಿತಿ ನಿರ್ಮಾಣವಾಗಬಾರದು ಎಂದರೆ ಸಾಮಾಜಿಕ ಅಂತರ, ಮಾಸ್ಕ್ ಧರಿಸುವುದು, ಸ್ಯಾನಿಟೈಸರ್ ಬಳಕೆ ಮುಂತಾದ ಕ್ರಮಗಳನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಬೇಕು. ಜನ ಕೋವಿಡ್ ನಿಯಮ ಪಾಲಿಸಿದರೆ ಲಾಕ್‌ಡೌನ್ ಅಗತ್ಯವಿಲ್ಲ. ಆದರೆ ನಿರ್ಲಕ್ಷ್ಯ ತೋರಿ ಲಾಕ್‌ಡೌನ್ ಪರಿಸ್ಥಿತಿಗೆ ಅವಕಾಶ ನೀಡಬೇಡಿ ಎಂದು ಅವರು ಮನವಿ ಮಾಡಿದರು.

ರಾತ್ರಿ ಕರ್ಫ್ಯೂ ಹೇರಿದ ತಕ್ಷಣ ಕೋವಿಡ್ ನಿಯಂತ್ರಣಕ್ಕೆ ಬರುತ್ತದೆ ಎಂದು ನಾವು ಅಂದುಕೊಂಡಿಲ್ಲ. ಆದರೆ ಜನರಲ್ಲಿ ಸೋಂಕಿನ ಬಗ್ಗೆ ಜಾಗೃತಿ ಮೂಡಿಸಲು ರಾತ್ರಿ ಕರ್ಫ್ಯೂ ಸಹಾಯ ಮಾಡುತ್ತದೆ. ಕಂಟೈನ್ಮೆಂಟ್ ವಲಯದಲ್ಲಿ ಪರೀಕ್ಷೆ ಪ್ರಮಾಣವನ್ನು ಹೆಚ್ಚಳ ಮಾಡುತ್ತೇವೆ. ಮೈಕ್ರೋ ಕಂಟೈನ್ಮೆಂಟ್ ವಲಯವನ್ನು ಕಟ್ಟುನಿಟ್ಟಾಗಿ ಜಾರಿ ಮಾಡುತ್ತೇವೆ ಎಂದರು. ರಾಜ್ಯಕ್ಕೆ 72 ಲಕ್ಷ ಡೋಸ್ ಲಸಿಕೆ ಬಂದಿದ್ದು, ಈ ಪೈಕಿ 61 ಲಕ್ಷ ಡೋಸ್ ಲಸಿಕೆಯನ್ನು ನೀಡಲಾಗಿದೆ. ಲಸಿಕೆ ಪಡೆದವರಲ್ಲಿ ಶೇ.53ರಷ್ಟು ಮಹಿಳೆಯರಿದ್ದಾರೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.